# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1733** |
| ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್.ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23-03-2026 |
| ಉತ್ತರಿಸುವ ಸಚಿವರು | | ಮಾನ್ಯ ಇಂಧನ ಸಚಿವರು |

****

<table>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲ್ಲೂಕಿನ ಜಾಲವಾಡ ಗ್ರಾಮದಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ನಿರ್ಮಿಸುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ದೊರೆತಿದೆಯೇ; ಹಾಗಿದ್ದಲ್ಲಿ, ಯೋಜನೆಗೆ ಮಂಜೂರಾದ ಅಂದಾಜು ಮೊತ್ತ ಎಷ್ಟು;</td><td rowspan="3">ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲ್ಲೂಕಿನ ಜಾಲವಾಡ ಗ್ರಾಮದಲ್ಲಿ 110 ಕೆ.ವಿ ವಿದ್ಯುತ್ ಉಪಕೇಂದ್ರ ಸ್ಥಾಪಿಸುವ ಪ್ರಸ್ತಾವನೆಯು ದಿನಾಂಕ :03-07-2025ರಂದು ನಡೆದ 2ನೇ ಕವಿಪ್ರನಿನಿ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.<br><br>ಸದರಿ ವಿದ್ಯುತ್ ಉಪ ಕೇಂದ್ರ ಸ್ಥಾಪನೆ ಕಾಮಗಾರಿಗೆ ಅವಶ್ಯವಿರುವ 05 ಎಕರೆ ಸರ್ಕಾರಿ ಜಮೀನಿನ ಬೇಡಿಕೆ ಮೊತ್ತ ರೂ.3,58,965/-ಗಳನ್ನು ಪಾವತಿಸಿ ಕವಿಪ್ರನಿನಿಗೆ ದಿನಾಂಕ : 02-12-2025 ರಂದು ಹಸ್ತಾಂತರಗೊಂಡಿದ್ದು, ಅಂದಾಜು ಪಟ್ಟಿ ತಯಾರಿಸಲು ಸರ್ವೇ ಕಾರ್ಯವು ಪ್ರಗತಿಯಲ್ಲಿರುತ್ತದೆ.</td></tr>
<tr><td>ಆ)</td><td>ಈ ಉಪಕೇಂದ್ರದ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಮತ್ತು ಎಷ್ಟು ಹಣ ವೆಚ್ಚವಾಗಿದೆ; (ಸಂಪೂರ್ಣ ವಿವರ ನೀಡುವುದು)</td></tr>
<tr><td>ಇ)</td><td>ಸದರಿ ಗ್ರಾಮದಲ್ಲಿ ಉಪಕೇಂದ್ರ ನಿರ್ಮಾಣಕ್ಕೆ ಭೂಮಿ ಲಭ್ಯವಿದ್ದರೂ ಕಾಮಗಾರಿ ಆರಂಭಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ವಿಳಂಬಕ್ಕೆ ನಿಜವಾದ ಕಾರಣಗಳೇನು;</td></tr>
<tr><td>ಈ)</td><td>ಜಾಲವಾಡ ಮತ್ತು ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವೋಲ್ಟೇಜ್ (Low Voltage) ಸಮಸ್ಯೆಯಿಂದಾಗಿ ರೈತರ ಪಂಪ್‌ಸೆಟ್‌ಗಳು ಸುಟ್ಟು ಹೋಗುತ್ತಿರುವುದು ಮತ್ತು ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಪ್ರಸ್ತುತ, ಜಾಲವಾಡ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವೋಲ್ಟೇಜ್ ಸಮಸ್ಯೆಯಿರುವುದಿಲ್ಲ. ಸರಿಪಡಿಸಲಾಗಿದ್ದು, ಈ ಭಾಗದಲ್ಲಿ ರೈತರ ಪಂಪಸೆಟ್ ಗಳು ಸುಟ್ಟು ಹೋಗುತ್ತಿರುವ ಬಗ್ಗೆ ಯಾವುದೇ ದೂರನ್ನು ರೈತರು ಸಲ್ಲಿಸಿರುವುದಿಲ್ಲ.</td></tr>
<tr><td>ಉ)</td><td>ಭಾಗದ ಸಾವಿರಾರು ರೈತರ ಹಿತದೃಷ್ಟಿಯಿಂದ, ಜಾಲವಾಡ ಗ್ರಾಮದ 110 ಕೆ.ವಿ ಉಪಕೇಂದ್ರದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲಾಗುವುದು?</td><td>ಕವಿಪ್ರನಿನಿಗೆ ಭೂ ಹಸ್ತಾಂತರಗೊಂಡಿದ್ದು, ಅಂದಾಜು ಪಟ್ಟಿ ತಯಾರಿಸಲು ಅವಶ್ಯಕ ಸರ್ವೇ ಕಾರ್ಯ ಪ್ರಗತಿಯಲ್ಲಿದೆ.<br>ವಿಸ್ತೃತ ಯೋಜನಾ ವರದಿ ಹಾಗೂ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಉಪ ಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.</td></tr>
</table>

ಸಂಖ್ಯೆ: ಎನರ್ಜಿ 93 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು